ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2319/2017

ಚಾಸಾ:5 ಪ್ರಾಸಾ:3

ದಿನಾಂಕ: 25.11.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಶೇಖರ |
| ತಂದೆಯ ಹೆಸರು | : | ಮೋಹನ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಹೊಟೇಲ್ ನಲ್ಲಿ ಕೆಲಸ |
| ವಾಸ ಸ್ಥಳ | : | ವಕ್ವಾಡಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ದಿ: 18-06-2017ರ 2 ಮಹಜರುಗಳನ್ನು ಹಾಗೂ ದಿ: 27-08-2017ರ 1 ಪಂಚನಾಮೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-3 ರಿಂದ 5 ಎಂದು ಸಾಕ್ಷಿ ಸಹಿಯನ್ನು ನಿಪಿ-3(ಎ) ರಿಂದ 5(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಪೋಟೋ ತೋರಿಸಲಾಗಿ ಅದರಲ್ಲಿ ತನ್ನನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-6 ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ.

ಸಾಕ್ಷಿ ಮುಮಾ1 ಮತ್ತು 2 ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 18-06-2017 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಸಂಜೆ 4 ರಿಂದ 4-30ರವರೆಗೆ

ತಕ್ಷೀರು ಸ್ಥಳ ಮತ್ತು ಸ್ವತ್ತು ಸ್ವಾಧೀನತಾ ಪಂಚನಾಮೆ ಜರುಗಿಸಿ ಮುಮಾ1ನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಸಂಜೆ 5 ರಿಂದ 5-20ರವರೆಗೆ ತಕ್ಷೀರು ಸ್ಥಳ ಪಂಚನಾಮೆ ಜರುಗಿಸಿ ಫೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 27-08-2017 ರಂದು ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಸಂಜೆ 4 ರಿಂದ 4-30ರವರೆಗೆ ಪಂಚನಾಮೆ ಜರುಗಿಸಿ ಕೃತ್ಯಕ್ಕೆ ಬಳಸಿದ ಕೆಎ-19-ಎಂಎ-1871 ಕೆಂಪು ಬಣ್ಣದ ಹುಂಡೈ ಕಂಪೆನಿಯ ಕಾರು ಹಾಗೂ ಕಾರಿನ ಹಿಂಬದಿ ಡಿಕ್ಕಿಯಲ್ಲಿ ಒಂದು ಬಿಳಿ ಬಣ್ಣದ ಪೈಪು ತುಂಡನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಮೇಲೆ ಹೇಳಿದ ಕ್ರಮಗಳನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**